**Akashvani: Bangalore**
**Regional Bulletin In Kannada**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**19.02.2026** **14.30hrs**

*********

**ಮುಖ್ಯಾಂಶಗಳು :**

- ಉಚಿತ ಗ್ಯಾರಂಟಿ ದೇಶದ ಆರ್ಥಿಕ ಅಭಿವೃದ್ಧಿಗೆ ಅಡ್ಡಿ - ಸುಪ್ರೀಂಕೋರ್ಟ್ ಅಭಿಮತ; ಉದ್ಯೋಗಾವಕಾಶ ಸೃಷ್ಟಿಸುವಂತೆ ಸಲಹೆ
- ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿ ವಾರ್ಷಿಕವಾಗಿ ರಾಜ್ಯದ ಐದು ಲಕ್ಷ ಪದವೀಧರರಿಗೆ ತರಬೇತಿ ನೀಡುವ ಗುರಿ - ಸಚಿವ ಪ್ರಿಯಾಂಕ್ ಖರ್ಗೆ
- ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ವರದಿ ಸಲ್ಲಿಸಿದ ನೀತಿ ಮತ್ತು ಯೋಜನಾ ಆಯೋಗ
- ಬಂಡೀಪುರ, ನಾಗರಹೊಳೆ ರಾಷ್ಟ್ರೀಯ ಉದ್ಯಾನಗಳಲ್ಲಿ ಸಫಾರಿಗೆ ವಿರೋಧ; ಮೈಸೂರಿನಲ್ಲಿ ಅರಣ್ಯ ಭವನಕ್ಕೆ ರೈತರಿಂದ ಮುತ್ತಿಗೆ
- ಬೆಂಗಳೂರಿನಲ್ಲಿ ಕಸ ನಿರ್ವಹಣೆ ಬಿಕ್ಕಟ್ಟು; ಸರ್ಕಾರದ ವಿರುದ್ಧ ಪ್ರತಿಪಕ್ಷ ನಾಯಕ ಆರ್. ಅಶೋಕ ಅಸಮಾಧಾನ

***********

ದೇಶದ ಆರ್ಥಿಕ ಅಭಿವೃದ್ಧಿಗೆ ಉಚಿತ ಕೊಡುಗೆಗಳ ಸಂಸ್ಕೃತಿ ಅಡ್ಡಿಯಾಗುತ್ತಿದೆ ಎಂದು ಸರ್ವೋಚ್ಚ ನ್ಯಾಯಾಲಯ ಅಭಿಪ್ರಾಯಪಟ್ಟಿದೆ. ದೇಶದ ಹೆಚ್ಚಿನ ರಾಜ್ಯಗಳು ಆದಾಯ ಕೊರತೆಯನ್ನು ಹೊಂದಿವೆ. ಆದರೂ ಅಭಿವೃದ್ಧಿಯನ್ನು ಕಡೆಗಣಿಸಿ, ಉಚಿತ ಕೊಡುಗೆಗಳನ್ನು ನೀಡಲಾಗುತ್ತಿದೆ ಎಂದು ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಹಾಗೂ ನ್ಯಾಯಮೂರ್ತಿಗಳಾದ ಜೋಯ್ಮಲ್ಯ ಬಾಗ್ಚಿ ಮತ್ತು ವಿಪುಲ್ ಎಂ. ಪಾಂಚೋಲಿ ನೇತೃತ್ವದ ಪೀಠ, ಅಸಮಾಧಾನ ವ್ಯಕ್ತಪಡಿಸಿದೆ. ಗ್ರಾಹಕರ ಆರ್ಥಿಕ ಸ್ಥಿತಿಯನ್ನು ಲೆಕ್ಕಿಸದೆ ಎಲ್ಲರಿಗೂ ಉಚಿತ ವಿದ್ಯುತ್ ಒದಗಿಸಿದ ತಮಿಳುನಾಡು ವಿದ್ಯುತ್ ವಿತರಣಾ ನಿಗಮ ಲಿಮಿಟೆಡ್ ವಿರುದ್ಧ ನ್ಯಾಯಾಲಯ ಅಸಮಾಧಾನ ವ್ಯಕ್ತಪಡಿಸಿದೆ. ಶ್ರೀಮಂತ ಹಾಗೂ ಬಡವರ ನಡುವೆ ವ್ಯತ್ಯಾಸವಿಲ್ಲದೆ ಎಲ್ಲರಿಗೂ ಉಚಿತ ವಸ್ತುಗಳನ್ನು ನೀಡುವುದು ತಪ್ಪು ನೀತಿಯಾಗಿದೆ. ಜನರು ಉಚಿತ ಆಹಾರ, ಸೈಕಲ್ ಮತ್ತು ವಿದ್ಯುತ್ ಪಡೆದರೆ, ಕೆಲಸ ಮಾಡುವ ಮನೋಭಾವ ಕಡಿಮೆಯಾಗಲಿದೆ ಎಂದು ಕಳವಳ ವ್ಯಕ್ತಪಡಿಸಿದೆ. ಉಚಿತ ವಸ್ತುಗಳನ್ನು ವಿತರಿಸುವ ಬದಲು ಉದ್ಯೋಗಾವಕಾಶಗಳನ್ನು ಸೃಷ್ಟಿಸುವತ್ತ ಗಮನಹರಿಸುವಂತೆ ರಾಜ್ಯಗಳಿಗೆ ಸಲಹೆ ನೀಡಿದೆ. ಇದೇ ವೇಳೆ ತಮಿಳುನಾಡಿನ ಡಿಎಂಕೆ ಸರ್ಕಾರ, ವಿದ್ಯುತ್ ವಿತರಣಾ ಸಂಸ್ಥೆ ಹಾಗೂ ಇತರರಿಗೆ ನ್ಯಾಯಾಲಯ ನೋಟಿಸ್ ನೀಡಿದೆ.

***********

ಕರ್ನಾಟಕವು ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರಲು ವಾರ್ಷಿಕವಾಗಿ ೫ ಲಕ್ಷ ಪದವೀಧರರಿಗೆ ತರಬೇತಿ ನೀಡುವ ಗುರಿ ಹೊಂದಿದೆ ಎಂದು ಐಟಿ-ಬಿಟಿ ಹಾಗೂ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಸ್ಪಷ್ಟಪಡಿಸಿದ್ದಾರೆ. ನವದೆಹಲಿಯಲ್ಲಿ ನಡೆದ ಕೃತಕಬುದ್ಧಿಮತ್ತೆ ಶೃಂಗಸಭೆಯಲ್ಲಿ ಮಾತನಾಡಿದ ಅವರು, ಕೌಶಲ್ಯ ಅಭಿವೃದ್ಧಿ ಜಾಗತಿಕ ಸಹಯೋಗದ ಮೇಲೆ ಕೇಂದ್ರೀಕರಿಸಿ ಕೃತಕಬುದ್ಧಿಮತ್ತೆ ಕ್ಷೇತ್ರದಲ್ಲಿ ರಾಜ್ಯವು ದೇಶದಲ್ಲೇ ಮೊದಲ ಸ್ಥಾನದಲ್ಲಿದೆ ಎಂದು ತಿಳಿಸಿದ್ದಾರೆ. ಹಾರ್ವೆ ಎಐ, ಆಂಥ್ರೋಪಿಕ್ ನಂತಹ ಜಾಗತಿಕ ದೈತ್ಯ ಕಂಪನಿಗಳು ರಾಜ್ಯದಲ್ಲಿ ನೆಲೆಯೂರಿದೆ ಎಂದು ಹೇಳಿದ್ದಾರೆ. ಎಐ ಶೃಂಗಸಭೆಯಲ್ಲಿ ಅವರು, ಜಾಗತಿಕ ಉದ್ಯಮ ದಿಗ್ಗಜರು, ಸಂಶೋಧಕರು ಮತ್ತು ನವೋದ್ಯಮ ಸಂಸ್ಥಾಪಕರ ಜೊತೆ ಸಮಾಲೋಚನೆ ನಡೆಸಿದ್ದಾರೆ. ಈ ಕುರಿತಂತೆ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಬೆಂಗಳೂರಿನಲ್ಲಿ ಬೆಳೆದ ಆಂಥ್ರೋಪಿಕ್ ಸಿಟಿಒ ರಾಹುಲ್ ಪಾಟೀಲ್ ಅವರೊಂದಿಗೆ ಕೃತಕ ಬುದ್ಧಿಮತ್ತೆ ಸಹಯೋಗದ ಕುರಿತು

ಚರ್ಚಿಸಿರುವುದು ಅದ್ಭುತವಾಗಿತ್ತು ಎಂದು ತಿಳಿಸಿದ್ದಾರೆ. ಆಸ್ಪತ್ರೆ ಕಾರ್ಯ ನಿರ್ವಹಣೆಗೆ ಸುಧಾರಿತ ಎಂಟರ್‌ಪ್ರೈಸ್ ಕೃತಕ ಬುದ್ಧಿಮತ್ತೆಯನ್ನು ಪ್ರಾಯೋಗಿಕವಾಗಿ ಬಳಸಿಕೊಳ್ಳಲು ಹೆಚ್ ಕಂಪನಿ ಮತ್ತು ಬೆಂಗಳೂರಿನ ಸೇಂಟ್ ಜಾನ್ಸ್ ವೈದ್ಯಕೀಯ ಕಾಲೇಜು ಮತ್ತು ಸೇಂಟ್ ಜಾನ್ಸ್ ಸಂಶೋಧನಾ ಸಂಸ್ಥೆ ನಡುವಣ ಒಪ್ಪಂದಕ್ಕೆ ಸಹಿ ಹಾಕುವ ವೇಳೆ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ವೈದ್ಯಕೀಯ ಶಿಕ್ಷಣ ಸಚಿವ ಶರಣ್ ಪ್ರಕಾಶ್ ಪಾಟೀಲ್ ಉಪಸ್ಥಿತರಿದ್ದರು.

***********

ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲ್ ಗೃಹ ಕಚೇರಿ ಕೃಷ್ಣಾದಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಆಯೋಗದ ವರದಿ ಸಲ್ಲಿಸಿದ್ದಾರೆ. ಈ ವೇಳೆ ಯೋಜನೆ ಹಾಗು ಸಾಂಖ್ಯಿಕ ಖಾತೆ ಸಚಿವ ಡಿ. ಸುಧಾಕರ್ ಉಪಸ್ಥಿತರಿದ್ದರು. ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಮುಖ್ಯಮಂತ್ರಿ ಅಪರ ಮುಖ್ಯ ಕಾರ್ಯದರ್ಶಿ ಅಂಜುಮ್ ಪರ್ವೇಜ್ ಹಾಗು ಆಯೋಗದ ಸದಸ್ಯರು ಉಪಸ್ಥಿತರಿದ್ದರು.

***********

ಬೆಂಗಳೂರಿನ ಮಹದೇವಪುರದಲ್ಲಿ ಕಸ ವಿಲೇವಾರಿ ನಿಲ್ಲಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಅಸ್ಸಾಂಗೆ ತೆರಳುವ ಮುನ್ನ ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ನಾಯಕರು ಕಸ ವಿಲೇವಾರಿ ವಿಚಾರದಲ್ಲಿ ರಾಜಕೀಯ ನಡೆಸುವುದನ್ನು ಅವರು ಖಂಡಿಸಿದ್ದಾರೆ.  ಕಸ ವಿಲೇವಾರಿ ಕುರಿತಂತೆ ಕೆಲವೆಡೆ ಜಮೀನು ನೀಡಲಾಗಿದ್ದು, ಟೆಂಡರ್ ಕೂಡ ಕರೆಯಲಾಗಿದೆ. ಆದರೆ ಬಿಜೆಪಿ ನಾಯಕರು ಈ ವಿಚಾರದಲ್ಲಿ ರಾಜಕೀಯ ಮಾಡುತ್ತಿದ್ದಾರೆ ಎಂದು ದೂರಿದ್ದಾರೆ. ಇದೇ ವೇಳೆ ಸಾರಿಗೆ ನೌಕರರು ಸರ್ಕಾರಕ್ಕೆ ಸಹಕಾರ ನೀಡುವಂತೆ ಮನವಿ ಮಾಡಿದ್ದಾರೆ.

***********

ಬಂಡಿಪುರ ರಾಷ್ಟ್ರೀಯ ಉದ್ಯಾನವನ ಹಾಗೂ ನಾಗರಹೊಳೆ ರಾಷ್ಟ್ರೀಯ ಉದ್ಯಾನವನಗಳಲ್ಲಿ ಸಫಾರಿ ಪುನರಾರಂಭ ಮಾಡುವ ಸರ್ಕಾರದ ನಿರ್ಧಾರಕ್ಕೆ ರೈತರಿಂದ ತೀವ್ರ ವಿರೋಧ ವ್ಯಕ್ತವಾಗಿದೆ. ಈ ಹಿನ್ನೆಲೆಯಲ್ಲಿ ಮೈಸೂರಿನ ಅರಣ್ಯ ಭವನಕ್ಕೆ ರೈತರು ಇಂದು ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು. ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ವತಿಯಿಂದ ನಡೆದ ಪ್ರತಿಭಟನೆಯಲ್ಲಿ ಸರ್ಕಾರದ ವಿರುದ್ಧ ದಿಕ್ಕಾರ ಕೂಗಿ ರೈತರು, ಆಕ್ರೋಶ ವ್ಯಕ್ತಪಡಿಸಿದರು. ಕಾಡುಪ್ರಾಣಿಗಳ ದಾಳಿ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಫಾರಿ ಪುನರಾರಂಭ ಮಾಡುವುದು ಸೂಕ್ತವಲ್ಲ ಎಂದು ಆಗ್ರಹಿಸಿದರು. ಹುಲಿ-ಚಿರತೆಗಳ ದಾಳಿಯಿಂದ ಗ್ರಾಮೀಣ ಪ್ರದೇಶದ ಜನರು ಆತಂಕದಲ್ಲಿ ಬದುಕುತ್ತಿದ್ದಾರೆ. ಪ್ರವಾಸೋದ್ಯಮ ಹಿತದೃಷ್ಟಿಯಿಂದ ಸಫಾರಿ ಆರಂಭಿಸುವ ಬದಲು ಮೊದಲು ಗ್ರಾಮಸ್ಥರ ಭದ್ರತೆಗೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು. ಅರಣ್ಯ ಭವನದ ಗೇಟ್ ಬಳಿ ಜಮಾಯಿಸಿದ ಪ್ರತಿಭಟನಾಕಾರರು ಒಳ ಪ್ರವೇಶಿಸಲು ಯತ್ನಿಸಿದಾಗ ಪೊಲೀಸರು ತಡೆದಿದ್ದಾರೆ.  ಈ ವೇಳೆ ರೈತರು ಮತ್ತು ಪೊಲೀಸರ ನಡುವೆ ಕೆಲಕಾಲ ಮಾತಿನ ಚಕಮಕಿ ನಡೆಯಿತು. ಬಳಿಕ ಪೊಲೀಸರು ಪರಿಸ್ಥಿತಿ ನಿಯಂತ್ರಿಸಿದರು.

***********

ಸಾರಿಗೆ ಇಲಾಖೆ ಸಿಬ್ಬಂದಿ ನಡೆಸುತ್ತಿರುವ ಮುಷ್ಕರ ಹಾಗೂ ಬೆಂಗಳೂರಿನಲ್ಲಿ ಕಸ ನಿರ್ವಹಣಾ ಬಿಕ್ಕಟ್ಟಿನ ಕುರಿತು ಸರ್ಕಾರದ ವಿರುದ್ಧ ಪ್ರತಿಪಕ್ಷ ನಾಯಕ ಆರ್. ಅಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರ ಸ್ವೀಕರಿಸಿದಾಗಿನಿಂದ ಯಾವುದೇ ಇಲಾಖೆಗೆ ಸಮರ್ಪಕವಾಗಿ ಹಣ ನೀಡಲಾಗಿಲ್ಲ ಎಂದು ದೂರಿದ್ದಾರೆ. ಇದೇ ವೇಳೆ ಸರ್ಕಾರದ ಆರ್ಥಿಕ ದುರುಪಯೋಗ ಮತ್ತು ಆಡಳಿತಾತ್ಮಕ ವೈಫಲ್ಯವನ್ನು ಅವರು ಪ್ರಶ್ನಿಸಿದ್ದಾರೆ. ಸಾರಿಗೆ ಇಲಾಖೆ ಸಿಬ್ಬಂದಿ ಪ್ರತಿಭಟನೆ ಹಮ್ಮಿಕೊಂಡಿರುವುದು ಸರ್ಕಾರದ ವೈಫಲ್ಯಕ್ಕೆ ಸಾಕ್ಷಿ ಎಂದು ಹೇಳಿದ್ದಾರೆ.

***********

ಕೋಲಾರ ಜಿಲ್ಲಾಸ್ಪತ್ರೆಯಲ್ಲಿ ಸಿ.ಟಿ. ಸ್ಕ್ಯಾನ್ ಮತ್ತು ಎಂಆರ್‌ಐ ಸ್ಕ್ಯಾನ್ ಬಂದ್ ಆಗಿದ್ದು, ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ರೋಗಿಗಳು ಆರೋಪಿಸಿದ್ದಾರೆ. ಮಂಗಳವಾರ ತಡರಾತ್ರಿ ೧೨ ಗಂಟೆಯಿಂದ ಯಾವುದೇ ಮಾಹಿತಿ ನೀಡದೆ ಏಕಾಏಕಿ ಸ್ಕ್ಯಾನಿಂಗ್ ವಿಭಾಗ ಬಂದ್ ಮಾಡಲಾಗಿದೆ. ಖಾಸಗಿ ಸಂಸ್ಥೆ ನಿರ್ವಹಣೆ ಮಾಡುತ್ತಿರುವ ಸಿಟಿ ಮತ್ತು ಎಂಆರ್‌ಐ ಸ್ಕ್ಯಾನ್ ಸೌಲಭ್ಯ ಏಕಾಏಕಿ ನಿಲ್ಲಿಸಿರುವುದರಿಂದ ಸಾರ್ವಜನಿಕರಿಗೆ ತೊಂದರೆಯುಂಟಾಗಿದೆ ಎಂದು ದೂರಿದ್ದಾರೆ. ಈ ಕುರಿತು ಪ್ರತಿಕ್ರಿಯಿಸಿರುವ ಜಿಲ್ಲಾಧಿಕಾರಿ ಡಾ. ಎಂ.ಆರ್.ರವಿ, ಈ ಸಮಸ್ಯೆ ರಾಜ್ಯಾದ್ಯಂತ ಉಂಟಾಗಿದ್ದು, ಜಿಲ್ಲಾ ಶಸ್ತ್ರಚಿಕಿತ್ಸಕರ ಜೊತೆ ಸಮಾಲೋಚಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

***********

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಹಾಗೂ ವಿವಿಧ ವರ್ಗಗಳ ನಿಗಮಗಳಿಂದ ಆಯ್ಕೆಯಾದ ಫಲಾನುಭವಿಗಳಿಗೆ ಸುಮಾರು ೭ ಕೋಟಿ ರೂಪಾಯಿ ವೆಚ್ಚದಲ್ಲಿ ಸೌಲಭ್ಯ ವಿತರಿಸಲಾಗಿದೆ ಎಂದು ಶ್ರೀರಂಗಪಟ್ಟಣ ಶಾಸಕ ಎ.ಬಿ.ರಮೇಶ್ ಬಂಡಿಸಿದ್ದೇಗೌಡ ತಿಳಿಸಿದ್ದಾರೆ. ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸುತ್ತಿರುವ ಸ್ವಾವಲಂಬಿ ಸಾರಥಿ, ಹೊಲಿಗೆ ಯಂತ್ರ, ಅರಿವು ಶೈಕ್ಷಣಿಕ ಸಾಲ ಹಾಗೂ ವಿದೇಶಿ ವಿದ್ಯಾವಿಕಾಸ ಯೋಜನೆಗಳಡಿ ಆಯ್ಕೆಯಾದ ಫಲಾನುಭವಿಗಳಿಗೆ ಸೌಲಭ್ಯ ವಿತರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಈ ಸೌಲಭ್ಯ ಪಡೆದ ರೈತರು, ನಿರುದ್ಯೋಗಿಗಳು, ಸ್ವ ಉದ್ಯೋಗ ಮಾಡುವಂತೆ ಕರೆ ನೀಡಿದ್ದಾರೆ.

***********

ಯಾದಗಿರಿ ನಗರದಲ್ಲಿ ಮಾಸ್ಟರ್ ಪ್ಲಾನ್ ಕಾರ್ಯಾರಂಭಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಅಮೃತ್ ೨.೦ ಯೋಜನೆಯಡಿ ಡ್ರೋನ್ ಸರ್ವೆ ಕಾರ್ಯಕ್ಕೆ ಚಾಲನೆ ನೀಡಲಾಗಿದೆ. ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರ ಕಚೇರಿಯಲ್ಲಿ ಯುಡಾ ಅಧ್ಯಕ್ಷ ಬಾಬುರಾವ್ ಕಾಡ್ಲೂರ್ ಡ್ರೋನ್ ಕಾರ್ಯಚರಣೆಗೆ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ನಗರದಲ್ಲಿ ಸಮಗ್ರ ಮಾಸ್ಟರ್ ಯೋಜನೆ ಜಾರಿಯಾಗಲಿದ್ದು, ಅದರ ಪೂರ್ವ ಸಿದ್ಧತೆಯಾಗಿ ಡ್ರೋನ್ ಮೂಲಕ ಸರ್ವೆ ಕಾರ್ಯ ಕೈಗೊಳ್ಳಲಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ. ನಗರಾಭಿವೃದ್ಧಿ ಪ್ರಾಧಿಕಾರ ಆಯುಕ್ತ ಉಮೇಶ್ ಚವ್ಹಾಣ್ ಮಾತನಾಡಿ, ಅಮೃತ್ ೨.೦ ಯೋಜನೆಯ ಮಾರ್ಗಸೂಚಿಗಳ ಪ್ರಕಾರವೇ ಎಲ್ಲಾ ಕಾರ್ಯಗಳು ನಡೆಯಲಿವೆ ಎಂದು ತಿಳಿಸಿದ್ದಾರೆ.

***********

ಲಖನೌನ ಏಕನಾ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ರಣಜಿ ಟ್ರೋಫಿ ಸೆಮಿಫೈನಲ್ ಪಂದ್ಯದಲ್ಲಿ ಉತ್ತರಾಖಂಡದ ವಿರುದ್ಧ ಕರ್ನಾಟಕ ೬೫೦ಕ್ಕೂ ಅಧಿಕ ರನ್‌ಗಳ ಮುನ್ನಡೆ ಸಾಧಿಸಿದೆ. ಐದನೇ ದಿನದಾಟದ ಅಂತ್ಯಕ್ಕೆ ಎರಡನೇ ಇನ್ನಿಂಗ್ಸ್‌ನಲ್ಲಿ ಉತ್ತರಾಖಂಡ ೬ ವಿಕೆಟ್ ನಷ್ಟಕ್ಕೆ ೧೭೦ರನ್‌ಗಳಿಸಿ ಆಡುತ್ತಿದೆ. ಭಾರತ ಮೊದಲ ಇನ್ನಿಂಗ್ಸ್‌ನಲ್ಲಿ ೭೩೬ ಹಾಗೂ ಎರಡನೇ ಇನ್ನಿಂಗ್ಸ್‌ನಲ್ಲಿ ೩೨೩ ರನ್ ಗಳಿಸಿದೆ. ಉತ್ತರಾಖಂಡ ಮೊದಲ ಇನ್ನಿಂಗ್ಸ್‌ನಲ್ಲಿ ೨೩೩ ರನ್ ಗಳಿಸಿದೆ.

******END*****